ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003

ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ/ಏಪ್ರಿಲ್-2019/21/2018-19 ದಿನಾಂಕ: 22.11.2018

**:: ಸುತ್ತೋಲೆ ::**

ವಿಷಯ:- ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಖಾಸಗಿ ಅಭ್ಯರ್ಥಿಗಳ ನೋಂದಣಿಯನ್ನು ಉಪನಿರ್ದೇಶಕರ ಕಛೇರಿಯಲ್ಲಿ ನೋಂದಾಯಿಸಿಕೊಳ್ಳುವ ಬಗ್ಗೆ.

ಉಲ್ಲೇಖ:- 1) ಮಂಡಳಿ ಅಧಿಸೂಚನೆ ಸಂಖ್ಯೆ: ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2019/21/2018-19 ದಿ:20.09.2018.

2) ಈ ಕಛೇರಿ ಸಮ ಸಂಖ್ಯೆ ಪತ್ರದ ದಿನಾಂಕ:15.10.2018 & 31.10.2018

*******

ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಖಾಸಗಿ ಅಭ್ಯರ್ಥಿಗಳ ನೋಂದಣಿಯನ್ನು ಸಂಬಂಧಿಸಿದ ಉಪನಿರ್ದೇಶಕರ ಕಛೇರಿಯಲ್ಲಿ ನೋಂದಣಿ ಮಾಡಿ ನಂತರ SATS ಜಾಲತಾಣದಲ್ಲಿ ಅಪ್‌ಲೋಡ್ ಮಾಡುವಂತೆ ಉಲ್ಲೇಖಿತ-1ರ ಅಧಿಸೂಚನೆಯಲ್ಲಿ ಸೂಚಿಸಲಾಗಿದೆ. ಹಾಗೂ ಉಪನಿರ್ದೇಶಕರ ಕಛೇರಿಯಲ್ಲಿ ಸದರಿ ಅಭ್ಯರ್ಥಿಗಳ ನೋಂದಣಿ ಮಾಡಲು ಉಲ್ಲೇಖ-2ರಂತೆ ದಿನಾಂಕ:14.11.2018ರವರೆಗೆ ವಿಸ್ತರಣೆ ಮಾಡಲಾಗಿರುತ್ತದೆ. ಆದಾಗ್ಯೂ ಕೆಲವು ಶಾಲೆಯ ಮುಖ್ಯೋಪಾಧ್ಯಾಯರು ಉಪನಿರ್ದೇಶಕರ ಕಛೇರಿಯಿಂದ ಖಾಸಗಿ ಅಭ್ಯರ್ಥಿಗಳ ನೋಂದಣಿಯನ್ನು ಮಾಡದೆ, SATS ಜಾಲತಾಣದಲ್ಲಿ ನೇರವಾಗಿ ಅಪ್‌ಲೋಡ್ ಮಾಡಿರುವುದು ಕಂಡುಬಂದಿರುತ್ತದೆ.

ಉಪನಿರ್ದೇಶಕರ ಕಛೇರಿಯಿಂದ ಖಾಸಗಿ ಅಭ್ಯರ್ಥಿಗಳ ನೋಂದಣಿಯನ್ನು ಮಾಡದೆ SATS ಜಾಲತಾಣದಲ್ಲಿ ಈಗಾಗಲೇ ನೇರವಾಗಿ ಅಪ್‌ಲೋಡ್ ಮಾಡಿರುವಂತಹ ಅಭ್ಯರ್ಥಿಗಳನ್ನು ಕೂಡಲೇ ಸಂಬಂಧಿಸಿದ ಉಪನಿರ್ದೇಶಕರ ಕಛೇರಿಯಿಂದ ದಿನಾಂಕ:30.11.2018ರೊಳಗೆ ಕಡ್ಡಾಯವಾಗಿ ನೋಂದಣಿಯನ್ನು ಮಾಡುವಂತೆ ಕ್ರಮವಹಿಸಲು ಸೂಚಿಸಿದೆ.

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು

**ಗೆ,**
ರಾಜ್ಯದ ಎಲ್ಲಾ ಸರ್ಕಾರಿ, ಮಾನ್ಯತೆ ಪಡೆದ ಅನುದಾನಿತ ಹಾಗೂ ಅನುದಾನರಹಿತ ಶಾಲಾ ಮುಖ್ಯೋಪಾಧ್ಯಾಯರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು:-**
ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.